**3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

**<u>ಸಿ.ಸಿ.ನಂ. 1050/2024</u>**

ದಿನಾಂಕಃ **06.11.2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು ಃ | ಶಿವಕುಮಾರ್ | ಚಾಸಾ-1, ಪ್ರಾಸ.-1 |
| ತಂದೆಯ ಹೆಸರುಃ | ರಂಗಪ್ಪ | |
| ವಯಸ್ಸು ಃ | 30 ವರ್ಷ | |
| ಉದ್ಯೋಗ ಃ | ಚಾಲಕ | |
| ವಾಸ ಃ | ಬೀರೂರು | |

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ</u>

ಚಾಸಾ-2 ರಿಂದ 5 ನನಗೆ ಗೊತ್ತು. ಆರೋಪಿ ನನಗೆ ಗೊತ್ತು. ದಿಃ 10.02.2024 ರಂದು ಕೋಡಿಹಳ್ಳಿಯಿಂದ ಜೆ ಸಿ ಬಿ ಕೆಲಸ ಮುಗಿಸಿಕೊಂಡು ಮೈಲಾರಲಿಂಗೇಶ್ವರ ದೇವಸ್ಥಾನದ ಹತ್ತಿರ ಇರುವ ಜಾಗದಲ್ಲಿ ಚೀಟಿ ಹಣ ಕಟ್ಟುವ ಸಲುವಾಗಿ 7.45 ಗಂಟೆಗೆ ಹೋಗಿರುತ್ತೇನೆ. ಚೀಟಿ ವ್ಯವಹಾರ ನಡೆಸುತ್ತಿದ್ದ ಆರೋಪಿಯು ನೀನು ತಡವಾಗಿ ಬಂದಿದ್ದೀಯಾ ನಿನ್ನ ಹತ್ತಿರ ಚೀಟಿಯ ಹಣ ಕಟ್ಟಿಸಿಕೊಳ್ಳುವುದಿಲ್ಲ ಎಂದು ಹೇಳಿರುತ್ತಾನೆ. ಅದಕ್ಕೆ ಈ ವಾರ ಕಟ್ಟಿಸಿಕೊಳ್ಳದಿದ್ದರೆ ಮುಂದಿನ ವಾರ ಕಟ್ಟುತ್ತೇನೆ ಎಂದು ಹೇಳಿದ್ದಕ್ಕೆ ನೀನು ಚೀಟಿಗೆ ಬೇಡ ಎಂದು ಹೇಳಿರುತ್ತಾನೆ, ಅದನ್ನು ನಾನು ಪ್ರಶ್ನಿಸಿದಾಗ ಆರೋಪಿಯು ಅಲ್ಲೇ ಇದ್ದ ಹಿಡಿ ಗಾತ್ರದ ಇಟ್ಟಿಗೆಯಿಂದ ನನ್ನ ತಲೆಗೆ ಹೊಡೆದಿರುತ್ತಾನೆ. ಪರಿಣಾಮವಾಗಿ ನನ್ನ ತಲೆಯಿಂದ ರಕ್ತ ಬಂದಿತ್ತು. ನಂತರ ಸ್ಥಳಕ್ಕೆ ಬಂದ ಚಾಸಾ-2 ಮತ್ತು 3 ರವರು ಜಗಳವನ್ನು ಬಿಡಿಸಿ ಚಾಸಾ-2 ರವರ ಬೈಕಿನಲ್ಲಿ ಕೂರಿಸಿಕೊಂಡು ಬೀರೂರು ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆ ಕೊಡಿಸಿರುತ್ತಾರೆ. ನಂತರ ನಾನು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವಾಗ ಪೋಲಿಸರು ಬಂದು ನನ್ನ ಹೇಳಿಕೆ ಪಡೆದಿರುತ್ತಾರೆ. ಸಾಕ್ಷಿಯು ದಿಃ 10.02.2024 ರ ಹೇಳಿಕೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1 ಎಂದು, ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಂತರ ಮರುದಿನ ಬೆಳಗ್ಗೆ 10.30 ಗಂಟೆಗೆ ಸ್ಥಳಕ್ಕೆ ಬಂದು ಪರಿಶೀಲಿಸಿ ನಾನು ತೋರಿಸಿದ ಸ್ಥಳದಿಂದ ಚಾಸಾ-4 ಮತ್ತು 5 ರವರ ಸಮಕ್ಷಮ 10.30 ರಿಂದ 11.00 ಗಂಟೆವರೆಗೆ ಮಹಜರ್ ಕ್ರಮ ಜರುಗಿಸಿ ಆರೋಪಿ ಹಲ್ಲೆ ಮಾಡಲು ಉಪಯೋಗಿಸಿದ ಇಟ್ಟಿಗೆಯನ್ನು ವಶಪಡಿಸಿಕೊಂಡಿರುತ್ತಾರೆ. ಸಾಕ್ಷಿಯು ದಿಃ 11.02.2024 ರ ಮಹಜರ್ ನಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು, ಸಾಕ್ಷಿ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ತೆಗೆಯಲಾದ 2 ಛಾಯಾಚಿತ್ರಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು. ಆರೋಪಿ ಹಲ್ಲೆ ಮಾಡಲು ಉಪಯೋಗಿಸಿದ ಇಟ್ಟಿಗೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಮುಮಾ-1 ಎಂದು ಗುರುತಿಸಲಾಯಿತು. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಆರೋಪಿ ಗೈರುಹಾಜರಾಗಿದ್ದು ಆತನ ಗುರುತಿಸುವಿಕೆ ಬಗ್ಗೆ ತಕರಾರು ಇಲ್ಲಾ ಎಂದು ಆರೋಪಿ ಪರ ವಕೀಲರು ಹೇಳಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ಭಾಗಶಃ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

<u>ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ</u>

ಆರೋಪಿಯು ಆ ದಿನ ನನಗೆ ಅವ್ಯಾಚ್ಯ ಶಬ್ದಗಳಿಂದ ಬೈದಿರುತ್ತಾನೆ ಎಂದರೆ ಸರಿ. ದಿಃ 11.02.2024 ರಂದು ಪೋಲಿಸರು ಮಹಜರ್ ಕ್ರಮ ಜರುಗಿಸುವ ಸಲುವಾಗಿ ಸ್ಥಳಕ್ಕೆ ಬಂದಿದ್ದರು ಎಂದರೆ ಸರಿ.

<u>ಪಾಟೀಸವಾಲುಃ ಶ್ರೀ ಜಿ ಪಿ ಎಸ್ ಆರೋಪಿ ಪರ ವಕೀಲರು ಸಮಯ ಕೋರಿದ್ದರಿಂದ ಮುಂದೂಡಲಾಯಿತು.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಎ ಒ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.